# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 613 (724) |
| 2) ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3) ಉತ್ತರಿಸುವ ದಿನಾಂಕ | : | 14-12-2020 |
| 4) ಉತ್ತರಿಸುವವರು | : | ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2020ನೇ ವರ್ಷದಲ್ಲಿ ಕೊಡಗು ಜಿಲ್ಲೆಯಲ್ಲಿ ದಾಖಲಾಗಿರುವ ಕಾಡಾನೆ ದಾಳಿಯ ಪ್ರಕರಣಗಳ ಸಂಖ್ಯೆ ಎಷ್ಟು;</td><td>2020-21ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಡಾನೆ ದಾಳಿಯಿಂದ 04 ಮಾನವ ಪ್ರಾಣ ಹಾನಿ ಪ್ರಕರಣಗಳು ದಾಖಲಾಗಿರುತ್ತವೆ.</td></tr>
<tr><td>ಆ)</td><td>ಜೀವಹಾನಿ ಮತ್ತು ಶಾಶ್ವತ ಅಂಗವೈಕಲ್ಯತೆಯ ಪ್ರಕರಣ ಸಂಖ್ಯೆ ಎಷ್ಟು; (ಪ್ರಕರಣವಾರು ಪ್ರತ್ಯೇಕ ಮಾಹಿತಿ ನೀಡುವುದು)</td><td rowspan="2">ಮೃತಪಟ್ಟವರ ವಾರಸುದಾರರಿಗೆ ಪಾವತಿಸಿರುವ ಪರಿಹಾರಧನದ ವಿವರ ಈ ಕೆಳಗಿನಂತಿದೆ.<br><table>
<tr><th>ಕ್ರ ಸಂ</th><th>ಪ್ರಕರಣದ ವಿವರ</th><th>ಪರಿಹಾರ ಮೊತ್ತ (ರೂ.ಗಳಲ್ಲಿ)</th></tr>
<tr><td colspan="3">ಮಡಿಕೇರಿ ಪ್ರಾದೇಶಿಕ ವಿಭಾಗ</td></tr>
<tr><td>1</td><td>ಎಂ.ಸಿ.ಲೋಕೇಶ್, ರಂಗಸಮುದ್ರ</td><td>750000-00</td></tr>
<tr><td>2</td><td>ನೀನಾ ಮುತ್ತಣ್ಣ, ಮೋದೂರು ಗ್ರಾಮ</td><td>750000-00</td></tr>
<tr><td>3</td><td>ಕುಡಿಯರ ಚಿಣ್ಣಪ್ಪ, ಯವಕಪಾಡಿ ಗ್ರಾಮ</td><td>750000-00</td></tr>
<tr><td colspan="3">ವೀರಾಜಪೇಟೆ ಪ್ರಾದೇಶಿಕ ವಿಭಾಗ</td></tr>
<tr><td>1</td><td>ಪಣಿ ಎರವರ ಮಾದ, ವೀರಾಜಪೇಟೆ</td><td>ಮೃತ ವ್ಯಕ್ತಿಯ ವಾರಸುದಾರರು ಅಗತ್ಯ ದಾಖಲೆಗಳನ್ನು ಒದಗಿಸಿದ ಕೂಡಲೇ ದಯಾತ್ಮಕಧನವನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗುವುದು.</td></tr>
</table><br>ಶಾಶ್ವತ ಅಂಗವೈಕಲ್ಯತೆಯ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ.</td></tr>
<tr><td>ಇ)</td><td>ಸದರಿ ಪ್ರಕರಣಗಳಲ್ಲಿ ಕಲ್ಪಿಸಿರುವ ಪರಿಹಾರದ ವಿವರಗಳೇನು; (ಪ್ರಕರಣವಾರು ಪ್ರತ್ಯೇಕ ಮಾಹಿತಿ ನೀಡುವುದು)</td></tr>
</table>

| | | |
|---|---|---|
| ಈ) | ಜಿಲ್ಲೆಯಲ್ಲಿ ಕಾಡಾನೆ ದಾಳಿಯನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು? | ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿ ಕಾಡಾನೆ ಹಾವಳಿಯನ್ನು ನಿಯಂತ್ರಿಸಲು ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.<br>• ಸೋಲಾರ್ ತಂತಿ ಬೇಲಿ ನಿರ್ಮಾಣ ಮತ್ತು ನಿರ್ವಹಣೆ ಕಾಮಗಾರಿ ಹಮ್ಮಿಕೊಳ್ಳಲಾಗಿದೆ.<br>• ಅರಣ್ಯದ ಅಂಚಿನ ಗ್ರಾಮಗಳಲ್ಲಿ ಆನೆಗಳು ಕಾಡಿನಿಂದ ನಾಡಿಗೆ ಬಾರದಂತೆ ಆನೆ ತಡೆಕಂದಕ ನಿರ್ಮಾಣ ಮತ್ತು ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.<br>• ಅರಣ್ಯದ ಅಂಚಿನ ಗ್ರಾಮಗಳಲ್ಲಿ ರೈತರಿಗೆ ಶೇ 50:50ರ ರಿಯಾಯಿತಿಯಲ್ಲಿ ಸೋಲಾರ್ ಬೇಲಿ ನಿರ್ಮಾಣವನ್ನು ಕೈಗೊಳ್ಳಲು ಅರಣ್ಯ ಇಲಾಖೆಯಿಂದ ಶೇ:50ರಷ್ಟು ಧನ ಸಹಾಯ ನೀಡಲಾಗುತ್ತಿದ್ದು, ಸದರಿ ಕಾರ್ಯಕ್ರಮವನ್ನು ಇನ್ನೂ ಹೆಚ್ಚಿನ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದೆ.<br>• ಕೊಡಗು ಜಿಲ್ಲೆಯ ಅರಣ್ಯ ವೃತ್ತದ ವ್ಯಾಪ್ತಿಯ ವಲಯಗಳಲ್ಲಿ ಕಾಡಾನೆ ಹಾವಳಿಯನ್ನು ತುರ್ತು ನಿರ್ವಹಣೆ ಕ್ಷಿಪ್ರ ಕಾರ್ಯಾಚರಣೆ ತಂಡ (ಆರ್.ಆರ್.ಟಿ)ಗಳನ್ನು ರಚಿಸಿ ಕಾರ್ಯನಿರ್ವಹಿಸಲಾಗುತ್ತಿದೆ.<br>• ಆಯ್ದ ವಲಯಗಳಲ್ಲಿ ಕಾಡಾನೆಗಳನ್ನು ಮರಳಿ ಕಾಡಿಗೆ ಓಡಿಸುವ ತಂಡ ರಚನೆ ಮಾಡಲಾಗಿರುತ್ತದೆ.<br>• ಕಾಡಾನೆಗಳ ಇರುವಿಕೆ, ಅವುಗಳ ಚಲನವಲನಗಳ ಬಗ್ಗೆ ಸಾರ್ವಜನಿಕರಿಗೆ, ರೈತರಿಗೆ ಮಾಹಿತಿ ನೀಡುವ SMS Alert System ಕಾರ್ಯ ನಿರ್ವಹಿಸುತ್ತಿದೆ.<br>• ವನ್ಯಪ್ರಾಣಿಗಳ ದಾಳಿಯಿಂದ ಭಾದಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ.<br>• ಕೊಡಗು ಜಿಲ್ಲೆಯಲ್ಲಿ 2014 ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿದೆ.<br>• ವೀರಾಜಪೇಟೆ ವಿಭಾಗದಲ್ಲಿ 9 ಆನೆಗಳಿಗೆ ರೇಡಿಯೋ-ಕಾಲರ್‌ಗಳನ್ನು ಅಳವಡಿಸಿ ಅವುಗಳ ಚಲನವಲನಗಳ ಬಗ್ಗೆ ನಿಗಾ ವಹಿಸಲಾಗುತ್ತಿದೆ.<br>• ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗಿದೆ.<br>• ವನ್ಯಪ್ರಾಣಿಗಳ ರಕ್ಷಣಾ ದೃಷ್ಟಿಯಿಂದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ 37 ವನ್ಯಪ್ರಾಣಿ ಹತ್ಯೆತಡೆ ಶಿಬಿರಗಳನ್ನು ಸ್ಥಾಪನೆ ಮಾಡಿ ಪ್ರತಿ ದಿನ ಗಸ್ತು ಮಾಡಿ, ಯಾವುದೇ ಅಕ್ರಮ ಚಟುವಟಿಕೆಗಳು ನಡೆಯದಂತೆ ಕ್ರಮ ಕೈಗೊಳ್ಳಲಾಗಿದೆ.<br>• ಈ ರಕ್ಷಣಾ ಕಾರ್ಯದ ಸಿಬ್ಬಂದಿಗಳಿಗೆ ಹಾಗೂ ಇಲಾಖಾ ಸಿಬ್ಬಂದಿಗಳಿಗೆ ವೈರ್‌ಲೆಸ್ ವಾಕಿ-ಟಾಕಿ, ಶಸ್ತ್ರಾಸ್ತ್ರ ಆಹಾರ ಸಾಮಗ್ರಿಗಳನ್ನು ಒದಗಿಸಿ ಪರಿಣಾಮಕಾರಿಯಾಗಿ ರಕ್ಷಣಾ ಕಾರ್ಯ ಕೈಗೊಳ್ಳಲಾಗಿದೆ. |

| | | |
|---|---|---|
| | | • ಅರಣ್ಯ ಪ್ರದೇಶದಲ್ಲಿರುವ ಕೆರೆಗಳಲ್ಲಿ ಹೂಳೆತ್ತುವ ಮೂಲಕ ಪುನಶ್ಚೇತನಗೊಳಿಸಲಾಗಿದ್ದು, ಕಾಡಿನಲ್ಲಿ ಕೆರೆಗಳನ್ನು ನಿರ್ಮಿಸುವುದು / ದುರಸ್ತಿ ಮಾಡುವುದು, ಚೆಕ್‌ಡ್ಯಾಂ, ಕಾಸ್ವೆಗಳ ನಿರ್ಮಾಣದಿಂದ ವನ್ಯಪ್ರಾಣಿಗಳಿಗೆ ಕುಡಿಯುವ ನೀರಿನ ಸೌಕರ್ಯ ಕಲ್ಪಿಸಲಾಗಿದೆ.<br><br>ಮಾನವ-ಪ್ರಾಣಿ ಸಂಘರ್ಷವನ್ನು ತಡೆಯಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳಲು **"ಕೊಡಗು ಮಾನವ-ವನ್ಯಪ್ರಾಣಿ ಸಂಘರ್ಷ ಉಪಶಮನ ಪ್ರತಿಷ್ಠಾನ"** ವನ್ನು ವೃತ್ತ ಮಟ್ಟದಲ್ಲಿ ಸ್ಥಾಪಿಸಲಾಗಿದೆ. |

**ಸಂಖ್ಯೆ: ಅಪಜೀ 219 ಎಫ್‌ಡಬ್ಲ್ಯೂಎಲ್ 2020**

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು